155 ಸೆಟ್ ನಿ-72-(21)
4/KR

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಗೋವಿಂದರಾಜು ರವರು ನಿಯಮ-72ರ ಅಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ.**

**ವಿಷಯ:** ರಾಜ್ಯದಲ್ಲಿ ಸೈಬರ್ ಅಪರಾಧ ಪ್ರಕರಣಗಳ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚಿದೆ. ಆದರೆ, ಪ್ರಕರಣಗಳನ್ನು ಭೇದಿಸಲು ಪೊಲೀಸ್ ಇಲಾಖೆಗೆ ಸಾಧ್ಯವಾಗುತ್ತಿಲ್ಲ. ಮಾಹಿತಿ ತಂತ್ರಜ್ಞಾನ ಕಾಯ್ದೆ 2000ರ ಅಡಿ 2022 ರಿಂದ 2024 ರ ನವೆಂಬರ್‌ವರೆಗೆ ರಾಜ್ಯದಲ್ಲಿ 55,948 ಪ್ರಕರಣಗಳು ದಾಖಲಾಗಿದ್ದು, ಅವುಗಳಲ್ಲಿ ಶೇ 14.51 ರಷ್ಟನ್ನು ಮಾತ್ರ ಭೇದಿಸಲು ಸಾಧ್ಯವಾಗಿದೆ. ಸೈಬರ್ ಅಪರಾಧಗಳ ಪತ್ತೆಗೆ ಸರಕಾರ ಎಲ್ಲ ಜಿಲ್ಲೆಗಳಲ್ಲಿ ಸಿಇಎನ್ ಪೊಲೀಸ್ ಠಾಣೆಗಳನ್ನು ಸ್ಥಾಪಿಸಿ ಅವುಗಳನ್ನು ಮೇಲ್ದರ್ಜೆಗೇರಿಸಿದೆ. ಡಿಜಿಪಿ (ಸೈಬರ್ ಮತ್ತು ನಾರ್ಕೋಟಿಕ್ಸ್) ಹುದ್ದೆಯನ್ನು ಸೃಷ್ಟಿಸಿದೆ. ಆದರೂ ಪ್ರಕರಣಗಳ ಪತ್ತೆ ಹೆಚ್ಚುವಲ್ಲಿ ನಿರೀಕ್ಷಿತ ಸುಧಾರಣೆ ಕಂಡುಬಂದಿಲ್ಲ.

**ಉತ್ತರ:**

ರಾಜ್ಯದಲ್ಲಿ ವರದಿಯಾಗಿರುವ ಸೈಬರ್ ಅಪರಾಧ ಪ್ರಕರಣಗಳಲ್ಲಿ ಆರೋಪಿಗಳ ವಿರುದ್ಧ ಐಟಿ ಕಾಯ್ದೆ ಮತ್ತು ಇತರೆ ಸಂಬಂಧಿತ ಕಾಯ್ದೆ/ಕಾನೂನುಗಳ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿಕೊಂಡು, ವೈಜ್ಞಾನಿಕವಾಗಿ ತನಿಖೆಯನ್ನು ಕೈಗೊಳ್ಳಲಾಗುತ್ತಿದೆ. 2022 ರಿಂದ 2024ರ ವರೆಗೆ ಸೈಬರ್ ಅಪರಾಧಗಳಡಿಯಲ್ಲಿ ದಾಖಲಿಸಿರುವ ಪ್ರಕರಣಗಳ ಸಂಖ್ಯೆ ಈ ಕೆಳಕಂಡಂತಿದೆ.

| ವರ್ಷ | ವರದಿ | ಪತ್ತೆ | ಪತ್ತೆ ಶೇಕಡವಾರು |
|---|---|---|---|
| 2022 | 12550 | 3275 | 26.09% |
| 2023 | 21900 | 5526 | 25.23% |
| 2024 | 21900 | 2060 | 9.40% |

**ರಾಜ್ಯದಲ್ಲಿ ಸೈಬರ್ ಅಪರಾಧಗಳನ್ನು ತಡೆಗಟ್ಟಲು ಹಾಗೂ ನಿಯಂತ್ರಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳು ಈ ಕೆಳಕಂಡಂತಿವೆ.**

- ಸರ್ಕಾರವು ಸೈಬರ್ ವಂಚನೆಗೊಳಗಾದ ಶೋಷಿತರ ಅನುಕೂಲಕ್ಕಾಗಿ ಪ್ರತಿ ಜಿಲ್ಲೆಯಲ್ಲಿ ಹಾಗೂ ನಗರ ವ್ಯಾಪ್ತಿಯಲ್ಲಿ ಒಂದೊಂದು ಸೈಬರ್ ಪೊಲೀಸ್ ಠಾಣೆಗಳನ್ನು(CEN ಪೊಲೀಸ್ ಠಾಣೆ) ಸ್ಥಾಪಿಸಿರುತ್ತದೆ. ಒಟ್ಟು 43 CEN ಪೊಲೀಸ್ ಠಾಣೆಗಳು ಕಾರ್ಯನಿರ್ವಹಿಸುತ್ತಿವೆ.

- ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ 43 CEN ಪೊಲೀಸ್ ಠಾಣೆಗಳ ಅಧಿಕಾರಿ ಹಾಗೂ ಸಿಬ್ಬಂದಿ ಸೇರಿದಂತೆ, 1063 ಪೊಲೀಸ್ ಠಾಣೆಗಳ ನುರಿತ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಸಿಐಡಿ ಸೈಬರ್ ಕ್ರೈಂ ಟ್ರೈನಿಂಗ್ ಸೆಂಟರ್‌ನಲ್ಲಿ ವಿಶೇಷ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.
- ಈ ತರಬೇತಿ ಮೂಲಕ, ಡಿಜಿಟಲ್ ಅರೆಸ್ಟ್ ವಂಚನೆ ಪ್ರಕರಣಗಳ ಜೊತೆಗೆ ಎಲ್ಲಾ ರೀತಿಯ ಸೈಬರ್ ಅಪರಾಧ ಪ್ರಕರಣಗಳ ತನಿಖೆ ಹಾಗೂ ಅಪರಾಧ ತಡೆ ಬಗ್ಗೆ, ಅಗತ್ಯ ಕಾರ್ಯಗಾರಗಳನ್ನು ಆಯೋಜಿಸಲಾಗುತ್ತಿರುತ್ತದೆ.
- ಡಿವೈ.ಎಸ್.ಪಿ/ಎಸಿಪಿ ರವರುಗಳು ಪೊಲೀಸ್ ಠಾಣಾಧಿಕಾರಿಗಳಾಗಿರುತ್ತಾರೆ. ಸುಸಜ್ಜಿತ ವೈಜ್ಞಾನಿಕ ಉಪಕರಣಗಳನ್ನು ಬಳಸಿ ಸೈಬರ್ ಅಪರಾಧಗಳನ್ನು ಭೇಧಿಸುವಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ನಿರಂತರ ಶ್ರಮವಹಿಸುತ್ತಿರುತ್ತಾರೆ.

- ಅಲ್ಲದೆ ಪ್ರತಿ ಪೊಲೀಸ್ ಠಾಣೆಗಳಲ್ಲಿಯೂ ಸಹ ದೂರನ್ನು ಸ್ವೀಕರಿಸುವಂತೆ ಸೂಕ್ತ ಕ್ರಮ ಕೈಗೊಳ್ಳಲಾಗಿದೆ.

- ಸೈಬರ್ ಕ್ರೈಂ ಅಪರಾಧಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವಲ್ಲಿ ಬಹಳಷ್ಟು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಎಲ್ಲಾ ವರ್ಗದ ಜನಗಳಿಗೂ ಸಾಮಾಜಿಕ ಜಾಲತಾಣ ಮತ್ತು ಎಲ್ಲಾ ಮಾಧ್ಯಮಗಳ ಮುಖಾಂತರ ಸಹ ಸಾಮಾನ್ಯ ಜನರಿಗೆ ಅನುಕೂಲವಾಗುವ ರೀತಿಯಲ್ಲಿ ಅರಿವು ಮೂಡಿಸಲಾಗುತ್ತಿರುತ್ತದೆ.

- ಸೈಬರ್ ಅಪರಾಧಗಳನ್ನು ತಡೆಗಟ್ಟುವ ಸಲುವಾಗಿ ಸಿಐಡಿ ಕಛೇರಿಯಲ್ಲಿ Centre for Cybercrime Investigation Training & Research (CCITR)ಘಟಕವನ್ನು ಪ್ರಾರಂಭಿಸಲಾಗಿದ್ದು, ಹಲವಾರು ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.

- ಬ್ಯಾಂಕಿಂಗ್ ಅಪರಾಧಗಳಿಗೆ ಸಂಬಂಧಿಸಿದಂತೆ ಆರ್.ಬಿ.ಐ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳು ಹಾಗೂ ಬ್ಯಾಂಕ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಬ್ಯಾಂಕಿಂಗ್ ಹಾಗೂ ಇತರೆ ಸೈಬರ್ ಅಪರಾಧಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಹಲವು ಪರಿಣಾಮಕಾರಿ ಸುರಕ್ಷತಾ ಕ್ರಮಗಳನ್ನು ಅನುಸರಿಸಿ ಸಾರ್ವಜನಿಕರ ಹಿತ ಕಾಪಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

- ಸಿಐಡಿಯ ಕಛೇರಿಯ ಸಿಸಿಐಟಿಆರ್ ವಿಭಾಗದಲ್ಲಿ 2019 ರಿಂದ ಸರ್ಕಾರಿ ಸಂಸ್ಥೆಗಳು ನ್ಯಾಯಾಧೀಶರುಗಳಿಗೆ, ಕಾನೂನು ಅಭಿಯೋಜಕರಿಗೆ, ಪೊಲೀಸ್ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಯವರುಗಳಿಗೆ ಸೈಬರ್ ಅಪರಾಧಗಳನ್ನು ತನಿಖೆ ಮತ್ತು ಪತ್ತೆ ಮಾಡುವ ಬಗ್ಗೆ ತರಬೇತಿಯನ್ನು ನೀಡಲಾಗಿರುತ್ತದೆ.

- ಸೈಬರ್ ಕ್ರೈಂ ಅಪರಾಧದ ಬಗ್ಗೆ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ವಾಟ್ಸ್‌ಆಪ್ ಹಾಗೂ ಟ್ವೀಟರ್‌ಗಳ ಮೂಲಕ ಸೈಬರ್ ಜಾಗೃತಿಯ ಸಂದೇಶಗಳನ್ನು ಸೈಬರ್ ಕ್ರೈಂ ಅಪರಾಧ ಮತ್ತು ತನಿಖೆಗಾಗಿ ಸಂಬಂಧಿಸಿದಂತೆ ಸೈಬರ್ ಅಪರಾಧಗಳ ತನಿಖೆ ಕೈಪಿಡಿಯನ್ನು (Cyber Investigation Manual) ಮುದ್ರಿಸಿ ರಾಜ್ಯದ ಎಲ್ಲಾ ಘಟಕಗಳಿಗೆ, ಪೊಲೀಸ್ ಠಾಣೆಗಳಿಗೆ ಮತ್ತು ಇತರೆ ಕಾನೂನು ಜಾರಿ ಸಂಸ್ಥೆಗಳಿಗೆ ಕಳುಹಿಸಿಕೊಡಲಾಗಿದೆ.

- ರಾಜ್ಯದಲ್ಲಿ ಸುಸಜ್ಜಿತವಾದ ನ್ಯಾಯವಿಜ್ಞಾನ ಪ್ರಯೋಗಾಲಯವು ಕಾರ್ಯನಿರ್ವಹಿಸುತ್ತಿದ್ದು, ಸೈಬರ್ ಕ್ರೈಂ ಅಪರಾಧಗಳಲ್ಲಿ ತನಿಖೆಗೆ ಸಂಬಂಧಿಸಿದಂತೆ ತಾಂತ್ರಿಕ ನೆರವು ನೀಡಲಾಗುತ್ತಿದೆ.

- ಸಿಐಡಿ ಕಛೇರಿಯ ಸಿ.ಎಫ್.ಯು ವಿಭಾಗದಲ್ಲಿ ಅತ್ಯಾಧುನಿಕ ತಂತ್ರಜ್ಞಾನದ ಸಾಫ್ಟ್‌ವೇರ್‌ಗಳನ್ನು ಬಳಸಿಕೊಂಡು ಪ್ರಕರಣಗಳಲ್ಲಿ ತಾಂತ್ರಿಕ ಸಹಾಯವನ್ನು ಒದಗಿಸಲಾಗುತ್ತಿದ್ದು, ಸದರಿ ಸಿ.ಎಫ್.ಯು ವಿಭಾಗದಲ್ಲಿ Magnet AXIOM, Belkasoft evidence center X, Cellbrite Digital Collector (Mac Forensic) Cellbrite Inspector (Mac Forensic),Oxygen forensic detective, UFED4PC, Hunchly, Merkle science, Pasware kit Forensic ಮುಂತಾದ ಸಾಫ್ಟ್‌ವೇರ್‌ಗಳನ್ನು ತಾಂತ್ರಿಕ ವಿಶ್ಲೇಷಣೆಗಾಗಿ ಸೈಬರ್ ಕ್ರೈಂ ಪ್ರಕರಣಗಳಲ್ಲಿ ಬಳಸಿಕೊಳ್ಳಲಾಗುತ್ತಿದೆ.

- ಸಿಡಿಐ ಘಟಕದ ಸಿಎಫ್‌ಯು ವಿಭಾಗದಲ್ಲಿ 2024ನೇ ಸಾಲಿನಲ್ಲಿ ಅತ್ಯಾಧುನಿಕ ತಂತ್ರಜ್ಞಾನದ ಸಾಫ್ಟ್‌ವೇರ್‌ಗಳನ್ನು ಬಳಸಿಕೊಂಡು ಕರ್ನಾಟಕ ರಾಜ್ಯಾದ್ಯಂತ ಕಾರ್ಯನಿರ್ವಹಿಸುತ್ತಿರುವ ಪೊಲೀಸ್ ಠಾಣೆಗಳ 257 ಪ್ರಕರಣಗಳಲ್ಲಿ ಒಟ್ಟು 1367 ತಾಂತ್ರಿಕ ವಿದ್ಯುನ್ಮಾನ ಸಾಧನಗಳನ್ನು ವಿಶ್ಲೇಷಣೆಗೆ ಒಳಪಡಿಸಿ ಪ್ರಕರಣಗಳಲ್ಲಿ ತಾಂತ್ರಿಕ ಸಹಾಯವನ್ನು ಒದಗಿಸಲಾಗಿರುತ್ತದೆ.

- ಸಿಐಡಿ ಕಛೇರಿಯ **Centre for Cybercrime Investigation Training & Research (CCITR)** ವಿಭಾಗದಲ್ಲಿ 2019ನೇ ಸಾಲಿನಿಂದ ಸರ್ಕಾರಿ ಸಂಸ್ಥೆಗಳಿಗೆ, ನ್ಯಾಯಾಧೀಶರುಗಳಿಗೆ, ಕಾನೂನು ಅಭಿಯೋಜಕರಿಗೆ, ಪೊಲೀಸ್ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಯವರುಗಳಿಗೆ ಸೈಬರ್ ಅಪರಾಧಗಳನ್ನು ತನಿಖೆ ಮತ್ತು ಪತ್ತೆ ಮಾಡುವ ಬಗ್ಗೆ ಹಲವಾರು ತರಬೇತಿಗಳನ್ನು ನೀಡಲಾಗುತ್ತಿರುತ್ತದೆ.

- ಸೈಬರ್ ಅಪರಾಧಗಳ ತನಿಖೆಯಲ್ಲಿ ತಾಂತ್ರಿಕ ಸಹಾಯವನ್ನು ಒದಗಿಸಲು ಸಿಐಡಿ ಘಟಕದ ಸಿಸಿಡಿ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿ.ಎಫ್.ಯು ಘಟಕದಲ್ಲಿ ಇಬ್ಬರು ನುರಿತ ತಾಂತ್ರಿಕ ತಜ್ಞರು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ.

- ಸದರಿರವರುಗಳು ಸಿಸಿಡಿ ವಿಭಾಗದ ಸೈಬರ್ ಅಪರಾಧ ಪ್ರಕರಣಗಳಲ್ಲಿ ಹಾಗೂ ರಾಜ್ಯದ ಇತರ ಪೊಲೀಸ್ ಠಾಣೆಗಳಲ್ಲಿ ದಾಖಲಾದ ಪ್ರಕರಣಗಳಲ್ಲಿ ಜಪ್ತಿಪಡಿಸಲಾದ ಡಿಜಿಟಲ್ ಉಪಕರಣಗಳನ್ನು ತಾಂತ್ರಿಕ ವಿಶ್ಲೇಷಣೆ ಕೈಗೊಂಡು ತಾಂತ್ರಿಕ ಸಹಾಯವನ್ನು ಒದಗಿಸುತ್ತಿರುತ್ತಾರೆ.

- ಹ್ಯಾಕಿಂಗ್ ಹಾಗೂ ಇತರೆ ಸೈಬರ್ ಅಪರಾಧ ಪ್ರಕರಣಗಳನ್ನು ಪತ್ತೆ ಹಚ್ಚಲು Drone Forensics, RAID Forensics, Wearable device forensics, Cloud forensics, Crypto currency tracing and investigation ನಂತಹ ಸುಧಾರಿತ ತರಬೇತಿಗಳನ್ನು ಹಾಗೂ ಆಧುನಿಕ ವಿದ್ಯುನ್ಮಾನ ತಾಂತ್ರಿಕ ಉಪಕರಣಗಳನ್ನು ಬಳಸಲು ಅಧಿಕಾರಿ/ಸಿಬ್ಬಂದಿಗಳಿಗೆ ವಿಶೇಷ ತರಬೇತಿಗಳನ್ನು ಸಹ ನೀಡಲಾಗುತ್ತಿರುತ್ತದೆ.

- ಕೇಂದ್ರ ಸರ್ಕಾರವು ಸಾರ್ವಜನಿಕರ ಅನುಕೂಲಕ್ಕಾಗಿ National Cyber Crime Reporting Portal ಅನ್ನು ಪ್ರಾರಂಭಿಸಿದ್ದು, ಈ ಮೂಲಕ 1930 ಹಾಗು 112 ಸಹಾಯವಾಣಿಯನ್ನು ಸಾರ್ವಜನಿಕರಿಗೆ ಪ್ರಾರಂಭಿಸಲಾಗಿದ್ದು, ವಂಚನೆಗೆ ಒಳಗಾದಾಗ ಈ ಪೋರ್ಟಲ್ ಮೂಲಕ ಪ್ರಕರಣವನ್ನು ದಾಖಲಿಸಲು ಅವಕಾಶ ಕಲ್ಪಿಸಿಕೊಡಲಾಗಿರುತ್ತದೆ. ಪೋರ್ಟಲ್ ನಿಂದ ರವಾನೆಯಾದಂತಹ ದೂರುಗಳನ್ನು CEN ಪೊಲೀಸ್ ಠಾಣೆಗಳಲ್ಲಿ ಪರಿಶೀಲಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ.

- ಸಿಐಡಿ ಘಟಕವನ್ನು ಪುನರ್‌ವಿಂಗಡನೆ ಮಾಡಿ ನೂತನವಾಗಿ ಎಡಿಜಿಪಿ ಸಿ&ಐಎನ್ ಹುದ್ದೆ ಹಾಗೂ ಒಂದು ಡಿಐಜಿಪಿ, ಸಿ&ಐಎನ್ ಹುದ್ದೆಯನ್ನು ಸೃಜಿಸಲಾಗಿರುತ್ತದೆ

➢ 2024ನೇ ಸಾಲಿನಿಂದ ಈವರೆಗೆ ಆಯೋಜಿಸಿರುವ ತರಬೇತಿಯ ವಿವರಗಳು:

| **ಸೈಬರ್ ಅಪರಾಧ ತರಬೇತಿ** | **ತರಬೇತಿ ಪಡೆದವರ ಸಂಖ್ಯೆ** |
|---|---|
| ಕರ್ನಾಟಕ ರಾಜ್ಯ ಪೊಲೀಸ್ ಅಧಿಕಾರಿ/ ಸಿಬ್ಬಂದಿಯವರುಗಳಿಗೆ ಸೈಬರ್ ಅಪರಾಧ ಬಗ್ಗೆ ಲೆವಲ್-1, ಲೆವಲ್-2 ಹಾಗೂ ಆಧುನಿಕ ಸುಧಾರಿತ ತರಬೇತಿ | 1938 |
| ಕರ್ನಾಟಕ ರಾಜ್ಯ ಪೊಲೀಸ್ ಅಧಿಕಾರಿ/ ಸಿಬ್ಬಂದಿಯವರುಗಳಿಗೆ ಸೈಬರ್ ಅಪರಾಧ ಬಗ್ಗೆ ಆನ್‌ಲೈನ್ ತರಬೇತಿ | 7457 |
| **ಒಟ್ಟು** | **9395** |

➢ **ಬೆಂಗಳೂರು ನಗರ:**

08 ಸೈಬರ್ ಸೆಕ್ಯೂರಿಟಿ ಅನಾಲಿಸ್ಟ್ ಹಾಗೂ 08 ಡಿಜಿಟಲ್ ಫಾರೆನ್ಸಿಕ್ ಅನಾಲಿಸ್ಟ್ ಒಟ್ಟು 16 ಸೈಬರ್ ತಾಂತ್ರಿಕ ತಜ್ಞರನ್ನು ಹೊರಗುತ್ತಿಗೆ ಆಧಾರದ ಮೇರೆಗೆ ನಿಯೋಜಿಸಲು ಆದೇಶ ನೀಡಲಾಗಿರುತ್ತದೆ.

ಅದರಲ್ಲಿ 06 ಡಿಜಿಟಲ್ ಫಾರೆನ್ಸಿಕ್ ಅನಾಲಿಸ್ಟ್ ಹುದ್ದೆಗೆ 02 ಸೈಬರ್ ಸೆಕ್ಯೂರಿಟಿ ಅನಾಲಿಸ್ಟ್ ಹುದ್ದೆಗೆ ಒಟ್ಟು 08 ತಾಂತ್ರಿಕ ತಜ್ಞರನ್ನು ಪೊಲೀಸ್ ಆಯುಕ್ತರು, ಬೆಂಗಳೂರು ನಗರ ಘಟಕಕ್ಕೆ ನೇಮಕ ಮಾಡಲಾಗಿರುತ್ತದೆ.

**ಸಂಖ್ಯೆ: HD 50 PCQ 2025**

**(ಡಾ: ಜಿ. ಪರಮೇಶ್ವರ)**
ಗೃಹ ಸಚಿವರು